ಆ) ಗುಲ್ಬರ್ಗಾ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ 4ನೇ ಹಂತದಡಿ 82 ಗ್ರಾಮಗಳನ್ನು ಆಯ್ಕೆ ಮಾಡಿ ಗ್ರಾಮಾಭಿವೃದ್ಧಿ ಯೋಜನೆಯನ್ನು ತಯಾರಿಸಿ, ಆಡಳಿತಾತ್ಮಕ ಅನುಮೋದನೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ರಸ್ತೆ, ಚರಂಡಿ, ಅಂಗನವಾಡಿ ಮತ್ತು ಸಮುದಾಯಭವನ ಕಟ್ಟಡ ಕಾಮಗಾರಿಗಳನ್ನು ಸಧ್ಯದಲ್ಲಿ ಕೈಗೆತ್ತಿಕೊಳ್ಳಲಾಗುವುದು.

ಇ) ಅಫಜಲಪೂರ ತಾಲ್ಲೂಕಿನಲ್ಲಿ ಪ್ರಸಕ್ತ ಸಾಲಿನಲ್ಲಿ 4ನೇ ಹಂತದಡಿ 5 ಗ್ರಾಮಗಳನ್ನು ಆಯ್ಕೆ ಮಾಡಿ ಗ್ರಾಮಾಭಿವೃದ್ಧಿ ಯೋಜನೆಯನ್ನು ತಯಾರಿಸಿ, ಆಡಳಿತಾತ್ಮಕ ಅನುಮೋದನೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ರಸ್ತೆ, ಚರಂಡಿ, ಅಂಗನವಾಡಿ ಮತ್ತು ಸಮುದಾಯಭವನ ಕಟ್ಟಡ ಕಾಮಗಾರಿಗಳನ್ನು ಸಧ್ಯದಲ್ಲಿ ಕೈಗೆತ್ತಿಕೊಳ್ಳಲಾಗುವುದು.

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಗ್ರಂಥಾಲಯದ ಅಭಿವೃದ್ಧಿ

185(535) **ಶ್ರೀ ಸಂಪಂಗಿ ಎನ್.** (ಬಾಗೇಪಲ್ಲಿ) : ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ನೆಹರು ಹಾಗೂ ಸರ್ ಎಂ. ವಿಶ್ವೇಶ್ವರಯ್ಯ ಗ್ರಂಥಾಲಯಗಳ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ. ಇದಕ್ಕೆ ನೀಡಿರುವ ಅನುದಾನ ಎಷ್ಟು ? (ವಿವರ ನೀಡುವುದು)

ಆ) ಬಾಗೇಪಲ್ಲಿ–ಗುಡಿಬಂಡೆ ತಾಲ್ಲೂಕುಗಳಲ್ಲಿರುವ ಗ್ರಾಮ ಪಂಚಾಯ್ತಿ ಗ್ರಂಥಾಲಯ, ಮಂಡಲ ಪಂಚಾಯ್ತಿ ಗ್ರಂಥಾಲಯಗಳಿಗೆ ಸ್ವಂತ ಕಟ್ಟಡ, ಸಿಬ್ಬಂದಿ ಇಲ್ಲದೇ ವಾಚಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ; ಇದಕ್ಕೆ ಸರ್ಕಾರವು ಮಾಡಲಿರುವ ಖರ್ಚು ಎಷ್ಟು ;

ಶ್ರೀ ರೇವು ನಾಯಕ್ ಬೆಳಮಗಿ (ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು) :

ಅ) ಸರ್.ಎಂ. ವಿಶ್ವೇಶ್ವರಯ್ಯ ಗ್ರಂಥಾಲಯದ ಅಭಿವೃದ್ಧಿ ಕಾಮಗಾರಿ ಕುರಿತು ಕಾರ್ಯಪಾಲಕ ಅಭಿಯಂತರರು, ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯಿತಿ ಇವರಿಂದ ರೂ. 200.04 ಲಕ್ಷಗಳ ಮೊತ್ತದ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಈ ಸಂಬಂಧವಾಗಿ ಈವರೆಗೆ ನಿರ್ದಿಷ್ಟವಾಗಿ ಯಾವುದೇ ಅನುದಾನ ನಿಗದಿಯಾಗಿರುವುದಿಲ್ಲ. ಆದಾಗ್ಯೂ ಆಯವ್ಯಯದ ಲಭ್ಯತೆಗೆ ಅನುಗುಣವಾಗಿ ಹಂತಹಂತವಾಗಿ ಸದರಿ ಗ್ರಂಥಾಲಯದ ಅಭಿವೃದ್ಧಿ ಕ್ರಮ ಜರುಗಿಸಲಾಗುವುದು.

ಆ) ಬಂದಿರುವುದಿಲ್ಲ. ಬಾಗೇಪಲ್ಲಿ ತಾಲ್ಲೂಕಿನ ಎರಡು ಗ್ರಾಮ ಪಂಚಾಯತಿ ಗ್ರಂಥಾಲಯಗಳು ಹಾಗೂ ಗುಡಿಬಂಡೆ ತಾಲ್ಲೂಕಿನಲ್ಲಿ ಮೂರು ಗ್ರಾಮ ಪಂಚಾಯಿತಿ ಗ್ರಂಥಾಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿದ್ದು, ಉಳಿದಂತೆ ಸದರಿ ತಾಲ್ಲೂಕುಗಳ ಬಾಕಿ ಗ್ರಾಮ ಪಂಚಾಯತಿ ಗ್ರಂಥಾಲಯಗಳು ಗ್ರಾಮ ಪಂಚಾಯತಿ ವತಿಯಿಂದ ನೀಡಿರುವ ಉಚಿತ ಕಟ್ಟಡಗಳಲ್ಲಿ ಸೇವೆ ಸಲ್ಲಿಸುತ್ತಿವೆ. ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸೂಕ್ತ ನಿವೇಶನಗಳನ್ನು ಇಲಾಖೆಯ ಹೆಸರಿಗೆ ನೋಂದಾಯಿಸಿ ಕೊಳ್ಳಲಾಗುತ್ತಿದ್ದು, ನಿವೇಶನ ದೊರಕಿದ ನಂತರ ಅವಶ್ಯಕ ಅಂದಾಜು ಪಟ್ಟಿಗಳನ್ನು ಹಾಗೂ ನೀಲಿ ನಕ್ಷೆಗಳನ್ನು ತಯಾರಿಸಿ ವಿವಿಧ ಯೋಜನೆಗಳಡಿ ಕಟ್ಟಡಗಳ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು. ಬಾಗೇಪಲ್ಲಿ ತಾಲ್ಲೂಕಿನ ಚೇಳೂರು ಗ್ರಾಮ ಪಂಚಾಯತಿ ಗ್ರಂಥಾಲಯದಲ್ಲಿ ಮಾತ್ರ ಮೇಲ್ವಿಚಾರಕ ಹುದ್ದೆ ಖಾಲಿ ಇದ್ದು, ಸದರಿ ಹುದ್ದೆಯ ಭರ್ತಿಗಾಗಿ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ತೀರ್ಥಹಳ್ಳಿ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ

186(916) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?